ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ./ಪೂ.ಸಿ.ಪ/30/2019–20 ದಿನಾಂಕ:15-02-2020

ಉಪನಿರ್ದೇಶಕರು (ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ,
______________________
______________________ ಜಿಲ್ಲೆ.

ಮಾನ್ಯರೆ

**ವಿಷಯ:** ಫೆಬ್ರವರಿ–2020ರ ರಾಜ್ಯ ಮಟ್ಟದ ಎಸ್.ಎಸ್.ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆ ನಡೆಸುವ ಕುರಿತು.

**ಉಲ್ಲೇಖ:** ಮಂಡಳಿಯ ಸುತ್ತೋಲೆಯ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ./ಪೂ.ಸಿ.ಪ/30/2019–20 ದಿನಾಂಕ: 01–02–2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯಾದ್ಯಾಂತ ಫೆಬ್ರವರಿ 2020 ರ ರಾಜ್ಯ ಮಟ್ಟದ ಎಸ್.ಎಸ್.ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ದಿನಾಂಕ. 17–02–2020ರಿಂದ 24–02–2020ರವರೆಗೆ ನಡೆಸಲು ವೇಳಾಪಟ್ಟಿಯನ್ನು ಪ್ರಕಟಿಸಿ ಪರೀಕ್ಷೆಯನ್ನು ನಡೆಸಲು ಶಾಲಾ ಮುಖ್ಯ ಶಿಕ್ಷಕರಿಂದ ಬಂದ ಪ್ರಶ್ನೆಪತ್ರಿಕೆ ಬೇಡಿಕೆಯಂತೆ ಈಗಾಗಲೇ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಜಿಲ್ಲಾವಾರು/ತಾಲ್ಲೂಕುವಾರು/ಶಾಲಾವಾರು ಪ್ರಶ್ನೆಪತ್ರಿಕೆಗಳನ್ನು ವಿತರಿಸಲಾಗುತ್ತಿದೆ. ಮಂಡಳಿಯ ಮೇಲ್ಕಾಣಿಸಿದ ಉಲ್ಲೇಖದನ್ವಯ ಆಯಾಯಾ ತಾಲ್ಲೂಕು ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ವತಿಯಿಂದ ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸಲು ಆಯ್ಕೆ ಮಾಡಿಕೊಂಡಿರುವ ಶಾಲೆಗಳನ್ನು ಹೊರತುಪಡಿಸಿ ಉಳಿದ ಶಾಲೆಗಳಿಗೆ ಸಕಾಲದಲ್ಲಿ ಪ್ರಶ್ನೆಪತ್ರಿಕೆ ವಿತರಣೆ ಮಾಡುವುದು. ಸಂಘದ ವತಿಯಿಂದ ಪರೀಕ್ಷೆ ನಡೆಸಲ್ಪಡುವ ಶಾಲೆಗಳಿಗೆ ಕರ್ನಾಟಕ ಪ್ರೌಢಶಿಕ್ಷಣ ಮಂಡಳಿಯಿಂದ ಸರಬರಾಜು ಆದ ಪ್ರಶ್ನೆಪತ್ರಿಕೆಗಳನ್ನು ವಿತರಿಸದೇ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಅಭಿರಕ್ಷೆಯಲ್ಲಿ ಸಂರಕ್ಷಿಸಿಡಲು ಸೂಚಿಸಲಾಗಿತ್ತು.

ಏತನ್ಮಧ್ಯೆ, ಕೆಲವೊಂದು ಶಾಲಾ ಮುಖ್ಯ ಶಿಕ್ಷಕರು ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ವತಿಯಿಂದ ನಡೆಸುವ ಪೂರ್ವ ಸಿದ್ಧತಾ ಪರೀಕ್ಷೆಗೆ ನಮ್ಮ ಶಾಲೆಗಳಿಂದ ಪರೀಕ್ಷೆಯನ್ನು ನಡೆಸಲು ಪ್ರಶ್ನೆಪತ್ರಿಕೆ ಬೇಡಿಕೆ ಸಲ್ಲಿಸಿರುವುದಿಲ್ಲ. ಆದಾಗ್ಯೂ ಕೆಲವು ಶಾಲೆಗಳನ್ನು ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘವು ಪ್ರಶ್ನೆಪತ್ರಿಕೆ ಬೇಡಿಕೆಯನ್ನು ನೀಡದಿದ್ದರೂ ಶಾಲೆಗಳನ್ನು ಸೇರಿಸಿ ಪಟ್ಟಿಯನ್ನು ಮಂಡಳಿಗೆ ನೀಡಿರುತ್ತಾರೆ. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ತಯಾರಿಸಿರುವ ಪ್ರಶ್ನೆಪತ್ರಿಕೆಗಳಿಗೆ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸಲು ಮಂಡಳಿಗೆ ಪ್ರಶ್ನೆಪತ್ರಿಕೆ ಬೇಡಿಕೆ ನೀಡಲಾಗಿದೆ. ನಮಗೆ ಮಂಡಳಿಯಿಂದ ಸಿದ್ಧಪಡಿಸಿರುವ ಪೂರ್ವ ಸಿದ್ಧತಾ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನೇ ನೀಡಬೇಕೆಂದು ಕೆಲವು ಶಾಲಾ ಮುಖ್ಯಶಿಕ್ಷಕರು ಕೋರುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಈ ಹಿನ್ನಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರಿಂದ ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘಕ್ಕೆ ಪ್ರಶ್ನೆಪತ್ರಿಕೆ ಬೇಡಿಕೆ ನೀಡಿರುವುದಿಲ್ಲ ಹಾಗೂ ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸುವುದಿಲ್ಲ. ನಾವು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಪೂರ್ವ ಸಿದ್ಧತಾ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಿಗೆ ಬೇಡಿಕೆ ನೀಡಿರುವುದರಿಂದ ಮಂಡಳಿಯ ಪೂರ್ವ ಸಿದ್ಧತಾ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ನೀಡಬೇಕೆಂದು ಶಾಲಾ ಮುಖ್ಯಶಿಕ್ಷಕರಿಂದ ಒಪ್ಪಿಗೆ ಪತ್ರ ಪಡೆದು ಮಂಡಳಿಯ ಪೂರ್ವ ಸಿದ್ಧತಾ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ ಹಾಗೂ ಉಳಿದಂತೆ ಉಲ್ಲೇಖದ ಸುತ್ತೋಲೆಯಲ್ಲಿ ಸೂಚಿಸಿರುವ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ತಮ್ಮ ನಂಬುಗೆಯ

15/2

(ಕೆ.ಹೆಚ್.ಚಂದ್ರಪ್ಪ)
ಕಾರ್ಯದರ್ಶಿಗಳು

ಪ್ರತಿಯನ್ನು:
ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಅವರ ಮುಖಾಂತರ ತಾಲ್ಲೂಕಿನ ಎಲ್ಲಾ ಶಾಲಾ ಮುಖ್ಯ ಶಿಕ್ಷಕರಿಗೆ ಅಗತ್ಯ ಕ್ರಮಕ್ಕಾಗಿ.